ಅನುಬಂಧ–I

ದಿನಾಂಕ 17–3–05ರ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

1805(2844) ಶ್ರೀ ಬಸವಣ್ಣೆಪ್ಪ ಜಿ.(ಹೊಳೆಹೊನ್ನೂರು): ಮಾನ್ಯ ಭಾರಿ, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ರೋಗಗ್ರಸ್ತವಾಗಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು?

ಆ) ಅವುಗಳಲ್ಲಿ ತೊಡಗಿರುವ ಬಂಡವಾಳ ಎಷ್ಟು?

ಇ) ಈ ಕೈಗಾರಿಕೆಗಳಿಂದ ಎಷ್ಟು ಕಾರ್ಮಿಕರಿಗೆ ನಿರುದ್ಯೋಗ ಉಂಟಾಗಿದೆ.

ಈ) ಈ ನಿರುದ್ಯೋಗಿಗಳಿಗೆ ಸರ್ಕಾರ ನೀಡಿರುವ ಪರಿಹಾರ ಏನು?

ಶ್ರೀ ಪಿ.ಜಿ.ಆರ್.ಸಿಂಧ್ಯ (ಭಾರಿ, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಸಚಿವರು):

ಅ) ಭಾರತೀಯ ರಿಸರ್ವ್ ಬ್ಯಾಂಕಿನ ವರದಿಯ ಪ್ರಕಾರ ದಿನಾಂಕ:31.3.2004ರಂತೆ 3767 ರೋಗಗ್ರಸ್ತ ಸಣ್ಣ ಪ್ರಮಾಣ ಘಟಕಗಳಿರುತ್ತದೆ. ಬಿ.ಐ.ಎಫ್.ಆರ್./ಎ.ಎ.ಐ.ಎಫ್.ಆರ್. ಪ್ರಕಾರ 244 ಭಾರಿ ಮತ್ತು ಮಧ್ಯಮ ಕೈಗಾರಿಕಾ ಘಟಕಗಳು ಇರುತ್ತದೆ.

ಆ) ವಿವರಗಳು ಲಭ್ಯವಿರುವುದಿಲ್ಲ.

ಇ) ಕೆಲವು ರೋಗಗ್ರಸ್ತ ಘಟಕಗಳು ಅವುಗಳ ಕಾರ್ಯನಿರ್ವಹಣೆಯನ್ನು ಮುಂದುವರೆಸುತ್ತವೆ. ಉದ್ಯೋಗ ಕಳೆದುಕೊಂಡಿರುವ ಕಾರ್ಮಿಕರ ವಿವರ ಲಭ್ಯವಿರುವುದಿಲ್ಲ.

ಈ) ಸರ್ಕಾರದ ವತಿಯಿಂದ ಯಾವುದೇ ಪರಿಹಾರ ಲಭ್ಯವಿರುವುದಿಲ್ಲ.

1806(2329) ಶ್ರೀ ಬಸವರಾಜ್ ರಾಯರೆಡ್ಡಿ (ಯಲಬುರ್ಗ): ಮಾನ್ಯ ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಸ್ಥಾಪಿತವಾಗಿರುವ ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು):

ಆ) ಆ ಪೈಕಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಸ್ಥಗಿತಗೊಂಡಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು):

ಇ) ಮುಚ್ಚಲ್ಪಟ್ಟಿರುವ ಕಾರ್ಖಾನೆಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಮುಚ್ಚಲ್ಪಟ್ಟಿರುವ ಕಾರ್ಖಾನೆಗಳಿಗೆ ಸರ್ಕಾರದ ವತಿಯಿಂದ ಜಮೀನು ನೀಡಿದ್ದಲ್ಲಿ ಸದರಿ ಜಮೀನು ನೀಡಿದ್ದಲ್ಲಿ ಸದರಿ ಜಮೀನುಗಳನ್ನು ವಾಪಸ್ಸುಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?